ಚಾಮುಂಡೇಶ್ವರಿ ವಿದ್ಯುತ್ ಸರಬರಾಜು
ನಿಗಮ ನಿಯಮಿತ
(ಕರ್ನಾಟಕ ಸರ್ಕಾರದ ಸ್ವಾಮ್ಯಕ್ಕೆ ಒಳಪಟ್ಟಿದೆ)
ನಿಗಮ ಕಾರ್ಯಾಲಯ, ಚಾವಿಸನಿನಿ,
ಮೈಸೂರು-570017
Telephone No: 0821-2343384

**CHAMUNDESHWARI ELECTRICITY SUPPLY CORPORATION LIMITED**
*(A Government of Karnataka Undertaking)*
Corporate Office,CESC, Mysore-570017
**Web Site:** www.cescmysore.org.
**E-Mail**: gmhrd@cescmysore.org

Company Identity Number[CIN]:- **U40109KA2004SGC035177**

ಕ್ರಮಾಂಕ:ಚಾವಿಸನಿನಿ/ಆ ಮತ್ತು ಮಾ.ಸಂ./05/04/2022-23/ cys - 730 ದಿನಾಂಕ: 06 AUG 2022

# ಸುತ್ತೋಲೆ

**ವಿಷಯ:** ಅಧಿಕಾರಿರವರುಗಳಿಗೆ ಮುಂದಿನ ಉನ್ನತ ಹುದ್ದೆಯ ವೇತನ ಶ್ರೇಣಿ ಹಾಗೂ ಕೆರಿಯರ್ ಅಡ್ವಾನ್ಸ್‌ಮೆಂಟ್ ಸೌಲಭ್ಯವನ್ನು ಮಂಜೂರು ಮಾಡುವ ಪ್ರಸ್ತಾವನೆಗಳನ್ನು ಪರಿಶೀಲಿಸದೇ ನಿಗಮದ ಅನುಮೋದನೆಗೆ ಸಲ್ಲಿಸುತ್ತಿರುವ ಬಗ್ಗೆ.

**ಉಲ್ಲೇಖ:**1. ನಿಗಮದ ಆದೇಶ ಸಂಖ್ಯೆ:ಕವಿಪ್ರನಿನಿ/ಬಿ16/5816/1982-83 ದಿನಾಂಕ:07.09.1982.
2. ನಿಗಮದ ಆದೇಶ ಸಂಖ್ಯೆ:ಕವಿಪ್ರನಿನಿ/ಬಿ16/5816/1982-83 ದಿನಾಂಕ: 02.09.1982.
3. ನಿಗಮದ ಆದೇಶ ಸಂಖ್ಯೆ:ಕವಿಪ್ರನಿನಿ/ಬಿ64/23585/2021-22 ದಿನಾಂಕ: 26.05.2022.
4. ನಿರ್ದೇಶಕರು (ಆ ಮತ್ತು ಮಾ.ಸಂ.) ಕವಿಪ್ರನಿನಿ ಬೆಂಗಳೂರುರವರ ಸುತ್ತೋಲೆ ಪತ್ರ ಸಂಖ್ಯೆ:ಕವಿಪ್ರನಿನಿ/ಬಿ64/12018/2020-21/06 ದಿನಾಂಕ:25.07.2022.

*****

ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಆದೇಶಗಳು ಮತ್ತು ಸುತ್ತೋಲೆಗಳನ್ವಯ ಅಧಿಕಾರಿಗಳ ಮುಂದಿನ ಉನ್ನತ ಹುದ್ದೆಯ ವೇತನ ಶ್ರೇಣಿ ಸೌಲಭ್ಯವನ್ನು ಹಾಗೂ ಕೆರಿಯರ್ ಅಡ್ವಾನ್ಸ್‌ಮೆಂಟ್ ಸೌಲಭ್ಯವನ್ನು ಮಂಜೂರಾತಿಗಾಗಿ ಸಲ್ಲಿಸಲಾಗುತ್ತಿರುವ ಪ್ರಸ್ತಾವನೆಗಳು ಸಂಬಂಧಪಟ್ಟ ವಿಭಾಗೀಯ/ವೃತ್ತ/ವಲಯ ಅಥವಾ ನಿಗಮ ಕಾರ್ಯಾಲಯಗಳಿಂದ ಸಮುಚಿತ ಮಾರ್ಗದ ಮುಖೇನ ನಿಗಮದ ಅನುಮೋದನೆಗಾಗಿ ಸಲ್ಲಿಸಬೇಕಾಗಿರುತ್ತದೆ. ಇತ್ತೀಚಿನ ದಿನಗಳಲ್ಲಿ ಸಲ್ಲಿಸಲಾಗುತ್ತಿರುವ ಪ್ರಸ್ತಾವನೆಗಳಲ್ಲಿ ಹಲವಾರು ತಪ್ಪು/ದೋಷಗಳು ಕಂಡುಬಂದಿದ್ದು. ಈ ರೀತಿ ನಿರ್ಲಕ್ಷತೆಯಿಂದ ಸಲ್ಲಿಸಲಾಗುತ್ತಿರುವ ಪ್ರಸ್ತಾವನೆಗಳಿಂದ ನಿಗಮದ ಸಮಯವು ವ್ಯರ್ಥವಾಗುತ್ತಿದ್ದು, ಸದರಿ ವಿಷಯವನ್ನು ಗಂಭೀರವಾಗಿ ಪರಿಗಣಿಸಿರುತ್ತದೆ.

ಉಲ್ಲೇಖಿತ ಆದೇಶ ಹಾಗೂ ಸುತ್ತೋಲೆಗಳಲ್ಲಿ ತಿಳಿಸಿರುವಂತೆ ಮುಂದಿನ ಉನ್ನತ ಹುದ್ದೆಯ ವೇತನ ಶ್ರೇಣಿ ಮತ್ತು ಕೆರಿಯರ್ ಅಡ್ವಾನ್ಸ್‌ಮೆಂಟ್ ಸೌಲಭ್ಯದ ಪ್ರಸ್ತಾವನೆಗಳನ್ನು ಸಲ್ಲಿಸುವ ಮೊದಲು ಅರ್ಹತೆಯನ್ನು ಕೂಲಂಕುಷವಾಗಿ ಪರಿಶೀಲಿಸಿದ ನಂತರ ನಿಗಮಕ್ಕೆ ಸಲ್ಲಿಸಬೇಕೆಂದು ಈ ಮೂಲಕ ಸೂಚಿಸಲಾಗಿದೆ. ತಪ್ಪಿದ್ದಲ್ಲಿ, ಸಂಬಂಧಪಟ್ಟ ಅಧಿಕಾರಿಗಳನ್ನು ನೇರ ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ಈ ಮೂಲಕ ತಿಳಿಸಲಾಗಿದೆ.

ಪ್ರಧಾನ ವ್ಯವಸ್ಥಾಪಕರು (ಆ ಮತ್ತು ಮಾ.ಸಂ)
ಚಾವಿಸನಿನಿ., ಮೈಸೂರು

**ಪ್ರತಿಗಳು:**

- ಮುಖ್ಯ ಪ್ರಧಾನ ವ್ಯವಸ್ಥಾಪಕರು(ಆಂ.ಪ), ನಿಗಮ ಕಛೇರಿ, ಮೈಸೂರುರವರ ಅವಗಾಹನೆಗಾಗಿ.
- ಮುಖ್ಯ ಇಂಜಿನಿಯರ್(ವಿ), ಮೈಸೂರು ವಲಯ, ಚಾವಿಸನಿನಿ, ಮೈಸೂರು/ಹಾಸನರವರ ಅವಗಾಹನೆಗಾಗಿ.
- ಎಲ್ಲಾ ಅಧೀಕ್ಷಕ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನಾ ವೃತ್ತ, ಚಾವಿಸನಿನಿರವರ ಮಾಹಿತಿಗಾಗಿ.
- ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನಾ ವಿಭಾಗ, ಚಾವಿಸನಿನಿರವರ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ.

ಪು.ತಿ.ನೋ

- ಉಪ ಪ್ರಧಾನ ವ್ಯವಸ್ಥಾಪಕರು(ಎಂ.ಐ.ಎಸ್), ನಿಗಮ ಕಛೇರಿ, ಮೈಸೂರು ನಿಗಮದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
- ಸಹಾಯಕ ಪ್ರಧಾನ ವ್ಯವಸ್ಥಾಪಕರು(ಆಂ.ನಿ), ನಿಗಮ ಕಾರ್ಯಾಲಯ, ಚಾವಿಸನಿನಿ., ಮೈಸೂರುರವರ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ.
- ಮಾನ್ಯ ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು(ತಾಂ)/ಮುಖ್ಯ ಆರ್ಥಿಕ ಸಲಹೆಗಾರರು ಇವರ ಆಪ್ತ ಕಾರ್ಯದರ್ಶಿಗಳಿಗೆ ಕಳುಹಿಸುತ್ತಾ ಪ್ರತಿಯನ್ನು ಮಾನ್ಯ ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು(ತಾಂ)/ ಮುಖ್ಯ ಆರ್ಥಿಕ ಸಲಹೆಗಾರರು ರವರ ಗಮನಕ್ಕೆ ತರುವಂತೆ ಕೋರಿದೆ.
- ಸ-2(ಆ ಮತ್ತು ಮಾ.ಸಂ)/ಪ್ರ.ಕಡತ.